# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ದಿನಾಂಕ:04.01.2025

ಸಂಖ್ಯೆ: ತುವಿ:ಅವಿ:2024–25/ 2879

## "ಸುತ್ತೋಲೆ"

ವಿಷಯ: ಜಿಲ್ಲಾಡಳಿತ ತುಮಕೂರು, ಜಿಲ್ಲಾ ಕೌಶಲ್ಯ ಮಿಷನ್ ತುಮಕೂರು ಮತ್ತು ತುಮಕೂರು ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ದಿನಾಂಕ:09.01.2025ರಂದು ನಡೆಯುವ ಬೃಹತ್ ಉದ್ಯೋಗ ಮೇಳದಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಕುರಿತು.

ಉಲ್ಲೇಖ: 1. ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ತುಮಕೂರು ಇವರ ಪತ್ರ ದಿನಾಂಕ:03.01.2025

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:04.01.2025

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ದಿನಾಂಕ:09.01.2025ರಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜಿವನೋಪಾಯ ಇಲಾಖೆ, ಜಿಲ್ಲಾಡಳಿತ ತುಮಕೂರು, ಜಿಲ್ಲಾ ಕೌಶಲ್ಯ ಮಿಷನ್ ತುಮಕೂರು ಮತ್ತು ತುಮಕೂರು ವಿಶ್ವವಿದ್ಯಾನಿಲಯದ ಸಂಯುಕ್ತಾಶ್ರಯದಲ್ಲಿ ವಿಶ್ವವಿದ್ಯಾನಿಲಯದ ಆವರಣದಲ್ಲಿ **"ಜಿಲ್ಲಾಮಟ್ಟದ ಉದ್ಯೋಗ ಮೇಳ"** ವನ್ನು ಆಯೋಜಿಸಲಾಗಿರುತ್ತದೆ. ಸದರಿ ಉದ್ಯೋಗ ಮೇಳದಲ್ಲಿ 50ಕ್ಕೂ ಹೆಚ್ಚು ಕಂಪನಿಗಳು ಬಾಗವಹಿಸುತ್ತಿದ್ದು, ಸುಮಾರು 1,600ಕ್ಕೂ ಹೆಚ್ಚು ಖಾಲಿ ಹುದ್ದೆಗಳಿಗೆ ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆಗೆ ಅನುಸಾರವಾಗಿ ಸಂದರ್ಶನದ ಮೂಲಕ ನೇರನೇಮಕಾತಿ ಮಾಡಿಕೊಳ್ಳಲಿದ್ದು, ತುಮಕೂರು ಜಿಲ್ಲೆಯ ಎಲ್ಲಾ ಪದವಿ ಹಾಗೂ ಸ್ನಾತಕೋತ್ತರ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಆದೇಶದ ಮೇರೆಗೆ

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ಹಾಗೂ ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಸ್ನಾತಕ &ಸ್ನಾತಕೋತ್ತರ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಉದ್ಯೋಗ ಅಧಿಕಾರಿ, ಉದ್ಯೋಗ ಕೋಶ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಸದರಿ ಸುತ್ತೋಲೆಯನ್ನು ತುಮಕೂರು ಜಿಲ್ಲೆಯ ವಿವಿ ಯ ಎಲ್ಲಾ ಸ್ನಾತಕ&ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ–ಮೇಲ್ ಮುಖಾಂತರ ಕಳುಹಿಸುವುದು ಮತ್ತು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
3. ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ತುಮಕೂರು–572101
4. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಆಪ್ತ ಕಾರ್ಯದರ್ಶಿಗಳು, ಮಾನ್ಯ ಕುಲಸಚಿವರ ಕಚೇರಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ

NHD24